7 49

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ 2014-15ನೇ ಸಾಲಿನಲ್ಲಿ 2ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:- 1) ಸರ್ಕಾರಿ ಆದೇಶ ಸಂಖ್ಯೆ: ಕೃಇ 29 ಕೃವಿಬೆ 2014, ದಿನಾಂಕ: 12-05-2014.

2) ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಇವರ ದಿನಾಂಕ: 01-07-2014ರ ಪತ್ರ ಸಂಖ್ಯೆ ಹನಿಅ/ವಿಭಾಗ/3/ಸಿ5/2014-15.

**** *** ****

ಪ್ರಸ್ತಾವನೆ:-

2014-15ನೇ ಸಾಲಿನ ಆಯವ್ಯಯದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಉದ್ದೇಶಗಳಿಗೆ ಲೆಕ್ಕ ಶೀರ್ಷಿಕೆ 2415-80-004-1-01-101ರಡಿ ಅನುದಾನ ರೂ.15,686.00 ಲಕ್ಷಗಳನ್ನು ನಿಗಧಿಪಡಿಸಿದ್ದು, ಮೇಲೆ (1)ರಲ್ಲಿ ಓದಲಾದ ದಿನಾಂಕ: 12-05-2014ರ ಆದೇಶದಲ್ಲಿ ಯೋಜನೇತರ ವೆಚ್ಚಕ್ಕಾಗಿ ರೂ.3921.50 ಲಕ್ಷಗಳನ್ನು (ಮೂರು ಸಾವಿರದ ಒಂಭೈನೂರ ಇಪ್ಪತೊಂದು ಲಕ್ಷ ಐವತ್ತು ಸಾವಿರ ರೂಪಾಯಿಗಳು ಮಾತ್ರ) ಮೊದಲನೇ ಕಂತಾಗಿ ಬಿಡುಗಡೆ ಮಾಡಲಾಗಿದೆ.

2. ಮೇಲೆ (2)ರಲ್ಲಿ ಓದಲಾದ ದಿನಾಂಕ: 01-07-2014ರ ಪತ್ರದೊಂದಿಗೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ಇವರು ಮೊದಲನೇ ತ್ರೈಮಾಸಿಕ ಅನುದಾನವಾಗಿ ಬಿಡುಗಡೆ ಮಾಡಲಾದ ಮೊತ್ತಕ್ಕೆ ಅನುದಾನದ ಬಳಕೆ ಪ್ರಮಾಣ ಪತ್ರವನ್ನು ಒದಗಿಸುತ್ತಾ ಎರಡನೇ ತ್ರೈಮಾಸಿಕ ಕಂತಿನ ಅನುದಾನ ರೂ.3921.50 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

3. ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕೃಇ 29 ಕೃವಿಬೆ 2014, ಬೆಂಗಳೂರು, ದಿನಾಂಕ: 22-08-2014

4. ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ 2014-15ನೇ ಸಾಲಿನ ಲೆಕ್ಕ ಶೀರ್ಷಿಕೆ 2415-80-004-1-01-101ರಡಿ ರೂ. 3921.50 ಲಕ್ಷಗಳನ್ನು (ಮೂರು ಸಾವಿರದ ಒಂಭೈನೂರ ಇಪ್ಪತೊಂದು ಲಕ್ಷ ಐವತ್ತು ಸಾವಿರ ರೂಪಾಯಿಗಳು ಮಾತ್ರ) 2ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ವೇತನ ಮತ್ತು ಇತರ ಭತ್ಯೆಗಳನ್ನು ಭರಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

1) ಪ್ರತಿ ತ್ರೈಮಾಸಿಕ ಅನುದಾನವನ್ನು ಆಯಾ ತ್ರೈಮಾಸಿಕದ ಬಳಿಕ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು.
2) ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು.
3) ಸರ್ಕಾರವು ನೀಡಿದ ಸೂಚನೆ ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು.
4) ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.
5) ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ.
6) ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

5. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಇವರು ಸಲ್ಲಿಸುವ ಬಿಲ್ಲಿಗೆ ಸರ್ಕಾರದ ಅಧೀನ ಕಾರ್ಯದರ್ಶಿ (ಕೃಷಿ ಸೇವೆಗಳು), ಕೃಷಿ ಇಲಾಖೆ ಇವರು ಮೇಲು ರುಜು ಮಾಡತಕ್ಕದ್ದು.

6. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 3 ಟಿಎಫ್‌ಪಿ 2014, ದಿನಾಂಕ: 04-04-2014ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದ ಅನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್. ಬಸವರಾಜಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ.
(ಸೇವೆಗಳು ಮತ್ತು ಸಮನ್ವಯ)
(ದೂರವಾಣಿ ಸಂಖ್ಯೆ: 080 2203 2344)

ಹೊರಡಿಸಿದೆ
ದಿನಾಂಕ: 27/8/14

ಇವರಿಗೆ:-

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
3. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮೇನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
6. ಕುಲಸಚಿವರು/ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು/ಇಲಾಖಾ ಅಂತರ್ಜಾಲ ತಾಣ.